# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/ /2022-23 ದಿನಾಂಕ :

ದಿನಾಂಕ: 20-08-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

<u>ಉಪಸ್ಥಿತರು:</u>

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 9 | ಶ್ರೀ.ಟಿ.ಆಂಜನೇಯ | ಹಿರಿಯ ಆರೋಗ್ಯ ಪರಿವೀಕ್ಷಕರು | 9880052188 |
| 10 | ಶ್ರೀ. ಡಿ.ಸುರೇಶ್ | ಎ.ಎಸ್.ಐ ವಿ.ವಿ.ಪುರಂ | 9738272392 |
| 11 | ಎನ್.ಅಶೋಕ | ಎ.ಎಸ್.ಐ ಬಸವನಗುಡಿ | 9845843535 |

ದಿನಾಂಕ 20-08-2022 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮು.ತಿ.ನೋ

4. ಮಾರ್ಕೆಟ್ ರಸ್ತೆ ನಂದಿನ ಹಾಲಿನ ಕೇಂದ್ರದ ಬಳಿ ಚರಂಡಿಯ ಕಲ್ಲುಗಳನ್ನು ಸರಿಪಡಿಸಿ ಸಿಮೆಂಟ್ ಹಾಕುವುದು.
5. ಕವಿಲಕ್ಷ್ಮೀಶ ರಸ್ತೆ ಹಾಗು ವಾಣಿ ವಿಲಾಸ್ ರಸ್ತೆಗಳು ಸೇರುವ ನ್ಯಾಷನಲ್ ಹೈ ಸ್ಕೂಲ್ ಸಿಗ್ನಲ್ ಬಳಿ ರಾತ್ರಿ 7.00 ಘಂಟೆಯಿಂದ 1.0 ಘಂಟೆವರೆವಿಗೂ ತಳ್ಳುವ ಗಾಡಿಯಲ್ಲಿ ಎಗ್‌ರೈಸ್ ವ್ಯಾಪಾರ ಮಾಡುತ್ತಿದ್ದು, ಇದರಿಂದ ಅಕ್ಕಪಕ್ಕದ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದರಿಂದ ತೆರವುಗೊಳಿಸುವುದು.

ಮಾನ್ಯ ನೋಡಲ್ ಅಧಿಕಾರಿಗಳು ಈ ಎಲ್ಲಾ ವಿಷಯಗಳನ್ನು ಸಭೆಯಲ್ಲಿ ಚರ್ಚಿಸಲಾಗಿ ಪೋಲೀಸ್ ಇಲಾಖೆಯ ಕಾನೂನು ಸುವ್ಯವಸ್ಥೆ ಸಂಚಾರಿ ವಿಭಾಗ ಅಧಿಕಾರಿಗಳು, ಆರೋಗ್ಯ ಇಲಾಖೆಯ ಹಿರಿಯ ಆರೋಗ್ಯ ಪರಿವೀಕ್ಷಕರನ್ನು ಸಮನ್ವಯತೆ ಸಾಧಿಸಿಕೊಂಡು ಸದರಿ ವಿಷಯಗಳ ಬಗ್ಗೆ ಸೂಕ್ತವಾದ ಕ್ರಮ ಕೈಗೊಳ್ಳುವಂತೆ ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಮಾತನಾಡಿ ಈ ಹಿಂದಿನ ಸಭೆಗಳಲ್ಲಿ ಪ್ರಸ್ತಾಪಿಸಲಾಗಿದ್ದ ವಿಷಯಗಳನ್ನು ಮತ್ತೊಮ್ಮೆ ಸಭೆಯ ಗಮನಕ್ಕೆ ತಂದು ಸೂಕ್ತ ಕ್ರಮ ವಹಿಸುವಂತೆ ಕೋರಿದರು.

1. ಆರ್.ವಿ ರಸ್ತೆಯಲ್ಲಿ ಬಸ್ ಶೆಲ್ಟರ್ ಅನ್ನು ನಿರ್ಮಿಸುವುದು.
2. ಶ್ರೀ.ರಾಮ ಮಂದಿರ ರಸ್ತೆಯಲ್ಲಿ ಕನ್ಸರ್‌ವೆನ್ಸಿಯಲ್ಲಿರುವ ಹಸುವಿನ ಕೊಟ್ಟಿಗೆಯನ್ನು ತೆರವುಗೊಳಿಸುವುದು.
3. ಸರ್ವೆಯರ್ ರಸ್ತೆಯ ಕನ್ಸರ್‌ವೆನ್ಸಿಯಲ್ಲಿರುವ ನಾನ್ ವೆಜ್ ಹೋಟೆಲ್ ಮತ್ತು ಹಾರ್ಡ್‌ವೇರ್ ಅಂಗಡಿಯ ಒತ್ತುವರಿಯನ್ನು ತೆರವುಗೊಳಿಸುವುದು.
4. ಕೆ.ಆರ್.ರಸ್ತೆ ಬಿ.ಎಂ.ಶ್ರೀರವರ ಪುತ್ಥಳಿ ಇರುವ ಸ್ಥಳದ ಬಳಿ ಕಸದ ಲಾರಿಯನ್ನು ನಿಲ್ಲಿಸುತ್ತಿದ್ದು ತೆರವುಗೊಳಿಸುವುದು.
5. ಕೆ.ಆರ್.ರಸ್ತೆಯ ಪಾದಾಚಾರಿ ಮಾರ್ಗದಲ್ಲಿರುವ ನರ್ಸರಿಯನ್ನು ತೆರವುಗೊಳಿಸುವುದು.
6. ಕೃಷ್ಣರಸ್ತೆ, ನಾರ್ತ್ ಪಬ್ಲಿಕ್ ಸ್ಕೂಲ್ ರಸ್ತೆ ಮತ್ತು ಹೆಚ್.ಬಿ.ಸಮಾಜ ರಸ್ತೆಗಳಲ್ಲಿನ ಕನ್ಸರ್‌ವೆನ್ಸಿಯನ್ನು ಕೆಲವರು ಒತ್ತುವರಿ ಮಾಡಿಕೊಂಡಿದ್ದು ಒತ್ತುವರಿಯನ್ನು ತೆರವು ಮಾಡುವ ಬಗ್ಗೆ.

ಈ ಮೇಲಿನ ಎಲ್ಲಾ ವಿಷಯಗಳನ್ನು ಚರ್ಚಿಸಲಾಗಿ ಮಾನ್ಯ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರು, ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಪೋಲೀಸ್ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ನಂತರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರುಗಳು ಪ್ರತ್ಯೇಕವಾಗಿ ಮಾತನಾಡುತ್ತಾ ಆರ್.ವಿ.ರಸ್ತೆ, ಡಯಾನಗಕ್ ರಸ್ತೆ, ವಾಸವಿ ದೇವಸ್ಥಾನದ ರಸ್ತೆ ಹಾಗೂ ವಾಣಿ ವಿಲಾಸ ರಸ್ತೆಗಳ ಪಾದಾಚಾರಿ ಮಾರ್ಗದಲ್ಲಿ ಅಳವಡಿಸಿರುವ ಕಾಬಲ್ ಸ್ಟೋನ್‌ಗಳು ಅಂಕುಡೊಂಕಾಗಿದ್ದು, ಸರಿಪಡಿಸಿಕೊಡುವಂತೆ ಕೋರಿದರು. ಆಗ ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡುತ್ತಾ ಸಂಬಂಧ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರುವುದಾಗಿ ಸಭೆಗೆ ತಿಳಿಸಿದರು.

ನಂತರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರವರ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(Signature)
ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -143 ವಿ. ವಿ.ಪುರಂ

(Signature)
ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)